ಕರ್ನಾಟಕ ಸರ್ಕಾರ
ಪೊಲೀಸ್ ಇಲಾಖೆ

ಸಂಖ್ಯೆ:93/ನೇಮಕಾತಿ-2/2020-21

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ರವರ ಕಛೇರಿ
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು, ದಿನಾಂಕ:25.08.2021

ವಿಷಯ: ಸಬ್-ಇನ್ಸ್‌ಪೆಕ್ಟರ್ (ಕೆ.ಎಸ್.ಐ.ಎಸ್ಎಫ್) (ಪುರುಷ ಮತ್ತು ಮಹಿಳಾ) ಹಾಗೂ ಸೇವಾನಿರತ ಹುದ್ದೆಗಳ ನೇಮಕಾತಿ ಕುರಿತು.

ಉಲ್ಲೇಖ:
1. ಅಧಿಸೂಚನೆ ಸಂಖ್ಯೆ:93/ನೇಮಕಾತಿ-2/2020-21, ದಿನಾಂಕ: 07.05.2020.
2. ತಾತ್ಕಾಲಿಕ ಆಯ್ಕೆ ಪಟ್ಟಿ ದಿನಾಂಕ: 03.03.2021.
3. ದ್ವಿತೀಯ ತಾತ್ಕಾಲಿಕ ಆಯ್ಕೆ ಪಟ್ಟಿ ದಿನಾಂಕ: 26.07.2021.
4. ಎ.ಡಿ.ಜಿ.ಪಿ, ಐ.ಎಸ್.ಡಿ, ಬೆಂಗಳೂರು ರವರ ಪತ್ರ ಸಂಖ್ಯೆ:05/ಸಿಬ್ಬಂದಿ/ಕೆಎಸ್ಐಎಸ್ಎಫ್ (ಐ.ಎಸ್.ಡಿ)/2021, ದಿನಾಂಕ: 18.08.2021.

## ಭಾಗಶಃ (3) ಅಂತಿಮ ಆಯ್ಕೆ ಪಟ್ಟಿ

ಸಬ್-ಇನ್ಸ್‌ಪೆಕ್ಟರ್ (ಕೆ.ಎಸ್.ಐ.ಎಸ್ಎಫ್) (ಪುರುಷ & ಮಹಿಳಾ) ಹಾಗೂ ಸೇವಾನಿರತ ಹುದ್ದೆಗಳ ನೇಮಕಾತಿಯನ್ನು ಉಲ್ಲೇಖಿತ-1ರ ಅಧಿಸೂಚನೆಯನ್ವಯ ಕೈಗೊಳ್ಳಲಾಗಿರುತ್ತದೆ. ಸದರಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸದಿಂತೆ ಈ ಕಚೇರಿಯಿಂದ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಉಲ್ಲೇಖಿತ-2ರನ್ವಯ ಪ್ರಕಟಿಸಲಾಗಿರುತ್ತದೆ. ವೃಂದ ಮತ್ತು ನೇಮಕಾತಿ ನಿಯಮಗಳಾದ ಕರ್ನಾಟಕ ರಾಜ್ಯ ಕೈಗಾರಿಕ ಭದ್ರತಾ ಪಡೆ (ವೃಂದ ಮತ್ತು ನೇಮಕಾತಿ) ನಿಯಮಗಳು, 2011 ರನ್ವಯ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗಿರುತ್ತದೆ. ವೈದ್ಯಕೀಯ ಪರೀಕ್ಷೆಯನ್ನು ನಡೆಸಿದ ನಂತರ ಸಲ್ಲಿಸಲಾದ ವರದಿಯನುಸಾರ ದ್ವಿತೀಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಉಲ್ಲೇಖಿತ-3 ರನ್ವಯ ಪ್ರಕಟಿಸಲಾಗಿರುತ್ತದೆ. ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳ ಗುಣ ಮತ್ತು ನಡತೆ ಹಾಗೂ ದಾಖಲೆಗಳ ಪರಿಶೀಲನೆಯನ್ನು ಕೈಗೊಳ್ಳುವಂತೆ ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ಆಂತರಿಕ ಭದ್ರತಾ ವಿಭಾಗ, ಬೆಂಗಳೂರು ರವರನ್ನು ಕೋರಲಾಗಿರುತ್ತದೆ. ಅದರಂತೆ ಸದರಿಯವರು ಉಲ್ಲೇಖಿತ-4 ರನ್ವಯ ಸಲ್ಲಿಸಿರುವ ವರದಿಯನಸಾರ 06 ಅಭ್ಯರ್ಥಿಗಳು ಅಂತಿಮ ಆಯ್ಕೆಗೆ ಅರ್ಹರಾಗಿರುತ್ತಾರೆ. ಆದ್ದರಿಂದ ವೃಂದ ಮತ್ತು ನೇಮಕಾತಿ ನಿಯಮಗಳು, 2011 ರಲ್ಲಿನ ನಿಯಮಗಳನ್ವಯ ಅರ್ಹ ಅಭ್ಯರ್ಥಿಗಳ ಭಾಗಶಃ ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಿ, ಕೆಳಕಂಡಂತೆ ಪ್ರಕಟಿಸಲಾಗಿರುತ್ತದೆ.

ಈ ಆಯ್ಕೆ ಪಟ್ಟಿಯು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿ / ಮಾನ್ಯ ಉಚ್ಚ ನ್ಯಾಯಾಲಯ / ಮಾನ್ಯ ಭಾರತದ ಸರ್ವೋಚ್ಛ ನ್ಯಾಯಾಲಯದ ಅಂತಿಮ ತೀರ್ಮಾನಗಳಿಗೆ ಒಳಪಟ್ಟಿರುತ್ತದೆ.

| FINAL SELECT LIST FOR THE POST OF SUB-INSPECTOR (KSISF) (MEN)MERITWISE | | | | | | | |
|---|---|---|---|---|---|---|---|
| SL. NO. | APPN. NO. | ROLL NO. | NAME | MARKS SECURED | | TOTAL | SELECTED CATEGORY |
| | | | | P-1 | P-2 | | |
| 1. | 3016059 | 4011751 | THEJESH S | 42 | 138 | 180 | GM_OTH |
| 2. | 3016759 | 4000645 | RAMANATHRADDY HARANAL | 39.5 | 136.5 | 176 | GM_RUR |
| 3. | 3014588 | 4008214 | SIDDU LAYAPPA BAGENNAVAR | 38.5 | 135 | 173.5 | GM_OTH |
| 4. | 3020117 | 4003358 | RAMESH HORATTI | 35 | 138 | 173 | 2A_RUR |
| 5. | 3023563 | 4005300 | VASUDEV KUNDARAGI | 41.5 | 129 | 170.5 | CAT-1_RUR |
| 6. | 3003305 | 4011748 | THILAK MG | 41 | 127.5 | 168.5 | GM_EXS |

**ಟಿಪ್ಪಣಿ:**

1] ಈ ಅಂತಿಮ ಆಯ್ಕೆ ಪಟ್ಟಿಯಲ್ಲಿನ ಆಯ್ಕೆಯ ಪ್ರವರ್ಗ ಮತ್ತು ಘಟಕದ ಹಂಚಿಕೆಯು, ನೇಮಕಾತಿ ಪ್ರಕ್ರಿಯೆಯ ವಿವಿಧ ಹಂತಗಳಲ್ಲಿ ಕೆಲವು ಅಭ್ಯರ್ಥಿಗಳ ಅನರ್ಹತೆಯ ಕಾರಣಗಳಿಂದ ಕ್ರೂಢೀಕೃತ ಆಯ್ಕೆ ಪಟ್ಟಿಯು ಪರಿಷ್ಕರಣೆಯಾದಲ್ಲಿ ಸದರಿ ಆಯ್ಕೆ ಪಟ್ಟಿಯಲ್ಲಿ ಬದಲಾವಣೆಯಾಗುವ ಪ್ರವರ್ಗಗಳನುಸಾರ ಘಟಕಗಳ ಬದಲಾವಣೆಯ ಷರತ್ತುಗಳಿಗೆ ಒಳಪಟ್ಟಿರುತ್ತದೆ.

2] ಎ.ಡಿ.ಜಿ.ಪಿ, ಐ.ಎಸ್.ಡಿ, ಬೆಂಗಳೂರು ರವರ ವರದಿಯನುಸಾರ ಮೇಲ್ಕಂಡ 06 ಅಭ್ಯರ್ಥಿಗಳನ್ನು ಅಂತಿಮ ಆಯ್ಕೆ ಪಟ್ಟಿಗೆ ಪರಿಗಣಿಸಲಾಗಿರುತ್ತದೆ. ಅದರಂತೆ, ಭಾಗಶಃ ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲಾಗಿರುತ್ತದೆ. ಉಳಿದ 14 ಅಭ್ಯರ್ಥಿಗಳ ಗುಣ ಮತ್ತು ನಡತೆ ಹಾಗೂ ದಾಖಲೆಗಳ ಪರಿಶೀಲನಾ ವರದಿಯನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಸ್ವೀಕರಿಸಿದ ನಂತರ ಪರಿಷ್ಕೃತ ಕ್ರೂಢೀಕೃತ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ಮತ್ತು ಅಧ್ಯಕ್ಷರು,
ಸಬ್-ಇನ್ಸ್‌ಪೆಕ್ಟರ್ (ಕೆ.ಎಸ್.ಐ.ಎಸ್.ಎಫ್)
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು.

**ಪ್ರತಿಯನ್ನು:**

1) ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ಆಂತರಿಕ ಭದ್ರತಾ ವಿಭಾಗ, ಬೆಂಗಳೂರು.
2) ಕಛೇರಿ ಕಡತ ಮತ್ತು ಸೂಚನಾ ಫಲಕ.

**ಪ್ರತಿಯನ್ನು ಅಭಿನಂದನೆಗಳೊಂದಿಗೆ:**

ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕರ್ನಾಟಕ ರಾಜ್ಯ, ಬೆಂಗಳೂರು.